# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –176(144)ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಸ ವಾರ್ಡ್ ಸಂಖ್ಯೆ: 176–ಸೋಮೇಶ್ವರನಗರ (ಹಳೆ ವಾರ್ಡ್–144) ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ಪ್ರದೀಪ್‌ಕುಮಾರ್ ಎನ್., ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕೆಂಪೇಗೌಡನಗರ ಉಪವಿಭಾಗ ಹಾಗೂ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:03/12/2022 ರಂದು ಶುಕ್ರವಾರದಂದು ಮದ್ಯಾಹ್ನ 11.15 ರಿಂದ 12.15 ರವರೆಗೆ ವಾರ್ಡ್ ಕಮಿಟಿ ಸಭೆಯನ್ನು ಟಿ. ಮರಿಯಪ್ಪ ರಸ್ತೆಯ ಬಯಲು ರಂಗ ಮಂದಿರದ ಹತ್ತಿರವಿರುವ ವಾರ್ಡ್ ಕಛೇರಿಯಲ್ಲಿ ನಡೆಸಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಶ್ರೀ. ಪ್ರದೀಪ್‌ಕುಮಾರ್ ಎನ್, ಸ.ಕಾ.ನಿ.ಅ (ಕೆ.ಗೌ.ನ) ಹಾಗೂ ನೋಡಲ್ ಅಧಿಕಾರಿ.
2. ಶ್ರೀ. ಆರ್. ಕೊಟ್ರೇಶ್ ನಾಯಕ್, ಸಹಾಯಕ ಅಭಿಯಂತರರು, ವಾರ್ಡ್–176(144).
3. ಶ್ರೀ. ಕೆ.ಎಲ್. ನಾಗರಾಜು, ಸಹಾಯಕ ಅಭಿಯಂತರರು (ಬೆಸ್ಕಾಂ)
4. ಶ್ರೀಮತಿ. ಸುರೇಖ, ಕಿರಿಯ ಆರೋಗ್ಯ ಪರಿವೀಕ್ಷಕರು ವಾಡ್–176(144)
5. ಹಾಗೂ ಸಾರ್ವಜನಿಕರಾದ ಶ್ರೀ. ಕಬೀರ್ ಕಮಲ್, ಶ್ರೀ. ಫಜಲ್‌ಖಾನ್, ಶ್ರೀ.ಏಜಾಸ್ ಅಹಮದ್, ಶ್ರೀ. ಭೀಮಪ್ಪ, ಶ್ರೀ. ಮಹೇಶ್, ಶ್ರೀ. ತೇಜಾಸ್ ಎ. ಗೌಡ, ಶ್ರೀ. ಅಜ್ಮಲ್, ಶ್ರೀ.ಜಯಕೃಷ್ಣನ್, ಶ್ರೀ ಸಲಾಹುದ್ದಿನ್ ಮತ್ತು ಶ್ರೀ. ಶಾಂತಕುಮಾರ್ ಕೆ.

*********

1. ನೋಡಲ್ ಅಧಿಕಾರಿಯವರು ಮಾತನಾಡಿ ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡ ಕ್ರಮಗಳ ಕುರಿತು ಕಳೆದ ಸಭೆಯ ನಡವಳಿಗಳನ್ನು ಓದುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಅದರಂತೆ ವಾರ್ಡ್ ಅಭಿಯಂತರರು ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿ ದೂರುಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಿಸಿದರು. ಅದರಂತೆ ಕಳೆದ ಸಭೆಯ ನಡವಳಿಗಳ ದೂರುಗಳನ್ನು ಪರಿಹರಿಸಲಾಗಿರುತ್ತದೆ.



Scanned with CamScanner

2. ಸಭೆಯಲ್ಲಿ ಹಾಜರಿದ್ದ ವಾರ್ಡಿನ ಎಲ್ಲಾ ಸಾರ್ವಜನಿಕರು ಮಾತನಾಡಿ ಪ್ರಸ್ತುತ ಹೊಸ ವಾರ್ಡಿನ ಅನ್ವಯದಂತೆ ಅಥವಾ ಹಳೆಯ ವಾರ್ಡಿನಂತೆ ಯಾವ ವಾರ್ಡ್ ಕಮಿಟಿ ಸಭೆಗೆ ಹಾಜರಾಗಬೇಕೆಂದು ನೋಡಲ್ ಅಧಿಕಾರಿಯವರಿಗೆ ವಿವರಣೆಯನ್ನು ನೀಡಲು ಕೋರಿದರು. ಅದರಂತೆ ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ವಿಷಯದ ಬಗ್ಗೆ ನಮ್ಮ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ತಾವು ತಿಳಿಸಿದ ವಿಷಯದ ಬಗ್ಗೆ ಪ್ರಸ್ತಾಪಿಸಿ ಕೂಡಲೇ ಬಗೆಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು.

3. ಸಭೆಯಲ್ಲಿ ಹಾಜರಿದ್ದ ವಾರ್ಡಿನ ಎಲ್ಲಾ ಸಾರ್ವಜನಿಕರು ಮಾತನಾಡಿ ಪ್ರಸ್ತುತ ಹೊಸ ವಾರ್ಡಿನಂತೆ ಕಾಮಗಾರಿಗಳ ವಿಂಗಡಣೆಯ ಬಗ್ಗೆ ಪ್ರಸ್ತಾಪಿಸಿದರು. ಅದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ವಿಷಯದ ಬಗ್ಗೆ ನಮ್ಮ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ತಾವು ತಿಳಿಸಿದ ವಿಷಯದ ಬಗ್ಗೆ ಪ್ರಸ್ತಾಪಿಸಿ ಕೂಡಲೇ ಬಗೆಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು.

4. ವಾರ್ಡಿನ ಸ್ಥಳೀಯರಾದ ಶ್ರೀ. ಇಜಾಜ್ ಅಹಮದ್ ಮತ್ತು ಫಜಲ್‌ಖಾನ್ ರವರು ಮಾತನಾಡಿ ಟ್ರೇಡ್ ಲೈಸನ್ಸ್ ನೀಡಲು ಯಾವ ದಾಖಲೆಗಳು ಬೇಕಾಗಬಹುದು ಅಥವಾ ಹಾಲಿ ಇರುವ ದಾಖಲೆಗಳಿಗೆ ಟ್ರೇಡ್ ಲೈಸನ್ಸ್ ನೀಡಬಹುದೇ ಎಂದು ಕೇಳಿದರು. ಇದರನ್ವಯ ಸದರಿ ವಿಷಯದ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಬಹುದಾಗಿರತ್ತದೆ ಎಂದು ತಿಳಿಸಿದರು.

5. ವಾರ್ಡಿನ ಗುಲ್ಬರ್ಗ ಕಾಲೋನಿಯ ಸ್ಥಳೀಯರಾದ ಶ್ರೀ. ಭೀಮಪ್ಪ ರವರು ಮಾತನಾಡಿ ಗುಲ್ಬರ್ಗ ಕಾಲೋನಿಯಲ್ಲಿರುವ ದುರಸ್ಥಿಯಲ್ಲಿರುವ ಬೋರ್‌ವೆಲ್‌ಗಳನ್ನು ಸದರಿಪಡಿಸುವುದು ಮತ್ತು ಚರಂಡಿಯಲ್ಲಿ ಹೂಳನ್ನು ತೆಗೆಯುವ ಬಗ್ಗೆ ಪ್ರಸ್ತಾಪಿಸಿದರು. ಪ್ರಸ್ತುತ ವಿಷಯದ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಿಸಿದ 153ರ ಅಭಿಯಂತರರಿಗೆ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊಂಬೇಗೌಡನಗರ ಉಪವಿಭಾಗ ರವರಿಗೆ ಈ ಬಗ್ಗೆ ಕ್ರಮ ಕೈಗೊಳ್ಳಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

6. ವಾರ್ಡಿನ ಸ್ಥಳೀಯರಾದ ಶ್ರೀ. ಮಹೇಶ್‌ರವರು ಮಾತನಾಡಿ ಸೋಮೇಶ್ವರನಗರದ ಮುಖ್ಯರಸ್ತೆಯ ನಿಮ್ಹಾನ್ಸ್ ಕಾಂಪೌಂಡ್ ಬಳಿ ಶುದ್ಧ ಕುಡಿಯುವ ನೀರಿನ ಘಟಕವನ್ನು ನಿರ್ಮಿಸುತ್ತಿರುವುದು ಸೂಕ್ತವಲ್ಲವೆಂದು, ಸಾಕಷ್ಟು ಬಾರಿ ಮಾನ್ಯ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಿಗೆ ತಿಳಿಸಿದ್ದರೂ ಸಹ ಪಾಲಿಕೆ ವತಿಯಿಂದ ಶುದ್ಧ ಕುಡಿಯುವ ನೀರಿನ ಘಟಕವನ್ನು ನಿರ್ಮಿಸಲಾಗುತ್ತಿದೆ. ಆದರೆ ಘಟಕದಿಂದ ವಾಹನಗಳ ಓಡಾಟಕ್ಕೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತದೆ ಎಂದು ಸಭೆಯಲ್ಲಿ ಚರ್ಚಿಸಿದರು.



Scanned with CamScanner

ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಶುದ್ಧ ಕುಡಿಯುವ ನೀರಿನ ಘಟಕವು ಸಾರ್ವಜನಿಕರಿಗಾಗಲೀ ಅಥವಾ ವಾಹನಗಳ ಓಡಾಟಕ್ಕೆ ತೊಂದರೆಯಾಗದಂತೆ ನಿರ್ಮಿಸಲಾಗಿರುತ್ತದೆ, ಘನ ಸರ್ಕಾರದಿಂದ ಅನುಮೋದಿತ ಕಾಮಗಾರಿಯಾದ್ದರಿಂದ ಹಾಗೂ ಸಾರ್ವಜನಿಕರ ಬೇಡಿಕೆಯಂತೆ ಶುದ್ಧ ಕುಡಿಯುವ ನೀರಿನ ಘಟಕವನ್ನು ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು.

7. ಸೋಮೇಶ್ವರನಗರ ಜೈ ಭವಾನಿ ಸಂಘದಿಂದ 2ನೇ ಮುಖ್ಯರಸ್ತೆ ಮತ್ತು 2ನೇ ಅಡ್ಡರಸ್ತೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲು ಸ್ಥಳಾವಕಾಶವಿದ್ದು, ಈ ಸ್ಥಳದಲ್ಲಿ ಒಂದು ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲು ಕೋರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ಸ್ಥಳವು ವಾರ್ಡ್–153ಕ್ಕೆ ಸಂಬಂಧಿಸಿದ್ದು, ಸದರಿ ಅಭಿಯಂತರರಿಗೆ ಈ ಬಗ್ಗೆ ತಿಳಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

8. ವಾರ್ಡಿನ ಸ್ಥಳೀಯರಾದ ಶ್ರೀ. ಕಬೀರ್ ಕಮಲ್ ರವರು ಮಾತನಾಡಿ ಹಳೆಯ ವಾರ್ಡ್ 153ರಲ್ಲಿ ಬೆಂ.ನೀ.ಸ ಮತ್ತು ಒ. ಮಂಡಳಿಯ ವತಿಯಿಂದ ರಸ್ತೆಗಳಲ್ಲಿ ನಿರ್ಮಿಸಲಾಗಿರುವ ಮ್ಯಾನ್ ಹೋಲ್ ಚೇಂಬರ್‌ಗಳನ್ನು ರಸ್ತೆಯ ಮಟ್ಟಕ್ಕೆ ಎತ್ತರಿಸಲು ಕೋರಿದರು. ಘನತ್ಯಾಜ್ಯ ನಿರ್ವಹಣೆ ಇಲಾಖೆಗೆ ಸಂಬಂಧಪಟ್ಟ ವಾಹನಗಳು ಸರಿಯಾದ ವೇಳೆಗೆ ವಾರ್ಡ್ ಪ್ರದೇಶದಲ್ಲಿ ಬಾರದೇ ಇರುವ ಕಾರಣ ಸಾರ್ವಜನಿಕರು ಕಸ ಎಲ್ಲಂದರಲ್ಲೇ ಹಾಕುತ್ತಿರುತ್ತಾರೆ. ಮತ್ತು ಬೆಸ್ಕಾಂ ವತಿಯಿಂದ ನೀಡುತ್ತಿರುವ ವಿದ್ಯುತ್ ಬಿಲ್ಲುಗಳಲ್ಲಿ ತುಂಬಾ ವ್ಯತ್ಯಾಸ ಕಂಡು ಬಂದಿರುತ್ತದೆ. ಎಂದು ಸಭೆಯಲ್ಲಿ ತಿಳಿಸಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಈ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಕಾರಿಗಳಿಗೆ ಕ್ರಮ ವಹಿಸಲು ಸೂಚಿಸುವುದಾಗಿ ಸಭೆಯಲ್ಲಿ ತಿಳಿಸಿದರು.

9. ವಾರ್ಡಿನ ಸ್ಥಳೀಯರಾದ ಶ್ರೀ. ಸಲಾಹುದ್ದಿನ್ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಪಾರ್ಕ್‌ನಲ್ಲಿ ಸರಿಯಾದ ವೇಳೆಯಲ್ಲಿ ವಿದ್ಯುತ್ ದೀಪಗಳು ಕಾರ್ಯ ನಿರ್ವಹಿಸುತ್ತಿಲ್ಲವೆಂದು ತಿಳಿಸಿದರು. ಹಾಗೂ ಸದರಿ ಪಾರ್ಕಿನಲ್ಲಿ ಜಿಮ್ ಸಲಕರಣೆಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲವೆಂದು ತಿಳಿಸಿದರು. ರಸ್ತೆಗಳಲ್ಲಿ ಬೀದಿ ನಾಯಿಗಳು ಹೆಚ್ಚಾಗಿವೆ ಎಂದು ತಿಳಿಸಿದರು. ಬಿ.ಹೆಚ್.ಇ.ಎಲ್ 1ನೇ ಮುಖ್ಯರಸ್ತೆಯಲ್ಲಿ ಹಾಲಿ ಇರುವ ಚರಂಡಿಯಲ್ಲಿ ನೀರು ಮಳೆಗಾಲದಲ್ಲಿ ಹಿಮ್ಮುಖವಾಗಿ ಹರಿದು ಮನೆಗಳಿಗೆ ಹಾಗೂ ರಸ್ತೆಗಳಿಗೆ ನೀರು ನುಗ್ಗಿ ತೊಂದರೆಯಾಗುತ್ತಿದೆ ಎಂದು ತಿಳಿಸಿದರು. ಆದ್ದರಿಂದ ಸದರಿ ರಸ್ತೆಯಲ್ಲಿ ಹೊಸದಾಗಿ ಚರಂಡಿಯನ್ನು ನಿರ್ಮಿಸಲು ಕೋರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಈ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಕಾರಿಗಳಿಗೆ ಕ್ರಮ ವಹಿಸಲು ಸೂಚಿಸುವುದಾಗಿ ಸಭೆಯಲ್ಲಿ ತಿಳಿಸಿದರು.



Scanned with CamScanner

10. ವಾರ್ಡಿನ ಸ್ಥಳೀಯರಾದ ಶ್ರೀ. ಅಜ್ಮಲ್ ರವರು ಮಾತನಾಡಿ ಸೋಮೇಶ್ವರನಗರದ ಮುಖ್ಯರಸ್ತೆಯಲ್ಲಿರುವ ಕಮಾನಿನ ಹತ್ತಿರ ರಸ್ತೆಗುಂಡಿ ಬಿದ್ದಿರುವುದನ್ನು ಸರಿಪಡಿಸಲು ಕೋರಿದರು. ಸದರಿ ರಸ್ತೆಯ ಚರಂಡಿಯ ಪಕ್ಕದಲ್ಲಿ ಮಳೆನೀರು ಸರಾಗವಾಗಿ ಹರಿಯಲು ತೋಳುಮೋರಿಯನ್ನು ನಿರ್ಮಿಸಲು ಕೋರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ರಸ್ತೆಯು ಮುಖ್ಯರಸ್ತೆಯಾಗಿದ್ದು, ರಸ್ತೆ ಮತ್ತು ಮೂಲಭೂತ ಸೌಕರ್ಯ ಇಲಾಖೆ ರವರಿಗೆ ಸರಿಪಡಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

11. ವಾರ್ಡಿನ ಸ್ಥಳೀಯರಾದ ಶ್ರೀ. ಮುನಿರಾಜು (ಗುಂಡ) ರವರು ಮಾತನಾಡಿ ಟಿ. ಮರಿಯಪ್ಪ ರಸ್ತೆಯಲ್ಲಿ ವಾಹನಗಳು ಅತೀ ವೇಗವಾಗಿ ಚಲಿಸುವುದರಿಂದ ಸಾರ್ವಜನಿಕರಿಗೆ ರಸ್ತೆ ದಾಟಲು ಹೋಗುವಾಗ ಅಪಘಾತವಾಗುವ ಸಂಭವವಿದ್ದು, ಈಗಾಗಲೇ ಸುಮಾರು ಸಾರ್ವಜನಿಕರಿಗೆ ಅಪಘಾತಗಳುಂಟಾಗಿವೆ ಆದ್ದರಿಂದ ವಾಹನಗಳ ವೇಗವನ್ನು ತಗ್ಗಿಸಲು ರಸ್ತೆಗೆ ಅಡ್ಡಲಾಗಿ ರಸ್ತೆ ಉಬ್ಬನ್ನು ನಿರ್ಮಿಸಲು ಕೋರಿದರು. ಸದರಿ ವಾರ್ಡ್ ಪ್ರದೇಶದಲ್ಲಿ ವಿದ್ಯುತ್‌ನಲ್ಲಿ ವ್ಯತ್ಯಯ ಉಂಟಾಗಿ ವಿದ್ಯುತ್ ಉಪಕರಣಗಳು ಹಾಳಾಗಿರುತ್ತವೆ. ಎಂದು ದೂರಿದರು ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ರಸ್ತೆ ಮತ್ತು ಮೂಲಭೂತ ಸೌಕರ್ಯ ಹಾಗೂ ಬೆಸ್ಕಾಂ ಇಲಾಖೆ ರವರಿಗೆ ಸರಿಪಡಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

12. ವಾರ್ಡಿನ ಸ್ಥಳೀಯರಾದ ಶ್ರೀ. ತೇಜಸ್‌ಗೌಡ ರವರು ಮಾತನಾಡಿ ಸೋಮೇಶ್ವರ ಮುಖ್ಯರಸ್ತೆಯ ಎರಡೂ ಬದಿಯಲ್ಲಿ ವಾಣಿಜ್ಯ ಮಳಿಗೆಗಳು ರಸ್ತೆಯ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುತ್ತದೆ ಆದ್ದರಿಂದ ಒತ್ತುವರಿಯನ್ನು ತೆರವುಗೊಳಿಸಬೇಕೆಂದು ದೂರಿದರು. ಹಾಗೂ ಸದರಿ ರಸ್ತೆಯಲ್ಲಿ ಅಲ್ಲಲ್ಲಿ ಎರಡೂ ಬದಿಗಳಲ್ಲಿ ನಿಂತಿರುವ ವಾಹನಗಳನ್ನು ತೆರವುಗೊಳಿಸಲು ಕೋರಿದರು. ಸದರಿ ಪ್ರದೇಶದಲ್ಲಿ ಧನದ ಮಾಂಸ ಮಾರಾಟ ಅಧಿಕವಾಗಿ ಮಾಡುತ್ತಿದ್ದು, ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಕೋರಿದರು. ಸೋಮೇಶ್ವರನಗರ ವಸತಿ ಪ್ರದೇಶದಲ್ಲಿ ಲಾಡ್ಜ್‌ಗಳ ಅಧಿಕವಾಗಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲು ಕೋರಿದರು ಮತ್ತು ಮಸೀದಿಗಳಲ್ಲಿ ಬಳಸುವ ಧ್ವನಿವರ್ಧಕದ ಶಬ್ಧವು ಜೋರಾಗಿದ್ದು, ಈ ಬಗ್ಗೆಯೂ ಸಹ ಕ್ರಮ ಕೈಗೊಳ್ಳಲು ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಈ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಕಾರಿಗಳಿಗೆ ಕ್ರಮ ವಹಿಸಲು ಸೂಚಿಸುವುದಾಗಿ ಸಭೆಯಲ್ಲಿ ತಿಳಿಸಿದರು.



Scanned with CamScanner

13. ವಾರ್ಡಿನ ಸ್ಥಳೀಯರಾದ ಶ್ರೀ. ತೇಜಸ್‌ಗೌಡ ರವರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಸುಮಾರು ವರ್ಷಗಳಿಂದ ಪಾಲಿಕೆಯ ಜಾಗದಲ್ಲಿ ಅನಧಿಕೃತವಾಗಿ ನಡೆಸುತ್ತಿದ್ದ ನರ್ಸರಿಗಳನ್ನು ಘನ ನ್ಯಾಯಾಲಯದ ಆದೇಶದಂತೆ ತೆರವುಗೊಳಿಸಿದ್ದು, ಈ ವಿಷಯಕ್ಕೆ ಸಂತಸ ವ್ಯಕ್ತಪಡಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

AEE 3/12/2022

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 176(144)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 176(144)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ ವಾರ್ಡ್ ಸಮಿತಿ/ಸಹಾಯಕ ಇಂಜಿನಿಯರ್‌ರವರ ಕಛೇರಿ, ಸೋಮೇಶ್ವರನಗರ ವಾರ್ಡ್–176(144), ಬೆಂಗಳೂರು

ದಿನಾಂಕ:01–12–2022

## –: ಸಭೆ ತಿಳುವಳಿಕೆ ಪತ್ರ :–

ವಿಷಯ: ದಿನಾಂಕ:03–12–2022 ರಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಿರುವ ಬಗ್ಗೆ.
ಉಲ್ಲೇಖ: ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಪತ್ರ ಸಂಖ್ಯೆ: ಬಿ12(5) /ಪಿಆರ್/35/2020–21, ದಿನಾಂಕ:21–09–2020.

*********

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೋಮೇಶ್ವರನಗರ ವಾರ್ಡ್ ಸಂಖ್ಯೆ: 176(144)ರ ವಾರ್ಡ್ ಸಮಿತಿಯ ಸಭೆಯನ್ನು ಶ್ರೀ. ಪ್ರದೀಪ್‌ಕುಮಾರ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕೆಂಪೇಗೌಡನಗರ ಉಪವಿಭಾಗ ಹಾಗೂ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿ ಅಧ್ಯಕ್ಷರು ರವರ ಅಪ್ಪಣೆ ಮೇರೆಗೆ ದಿನಾಂಕ:03–12–2022 ಶನಿವಾರದಂದು ಬೆಳಗ್ಗೆ 11.15 ರಿಂದ ಮಧ್ಯಾಹ್ನ 12.15 ರವರೆಗೆ ಕರೆಯಲಾಗಿದೆ ಹಾಗೂ ವಾರ್ಡ್ ಕಮಿಟಿಯ ಸಭೆಯನ್ನು ಟಿ. ಮರಿಯಪ್ಪ ರಸ್ತೆಯ ಬಯಲು ರಂಗ ಮಂದಿರದ ಹತ್ತಿರ ಇರುವ ವಾಡ್ ಕಛೇರಿಯಲ್ಲಿ ನಡೆಸಲು ಏರ್ಪಡಿಸಲಾಗಿದೆ. ಆದ ಪ್ರಯುಕ್ತ ವಾರ್ಡ್ ಕಮಿಟಿ ಅದಿಕಾರಿಗಳು (ಸದಸ್ಯರು) ಹಾಗೂ ವಾರ್ಡಿನ ಸಾರ್ವಜನಿಕ ಕುಂದು ಕೊರತೆಯ ಸಂಘ ಸಂಸ್ಥೆಯ ಪದಾದಿಕಾರಿಗಳು ದಯವಿಟ್ಟು ಸಭೆಗೆ ತಪ್ಪದೆ ಹಾಜರಾಗಿ, ವಾರ್ಡ್ ಅಭಿವೃದ್ಧಿ ಹಾಗೂ ಕುಂದು ಕೊರತೆಗಳ ಬಗ್ಗೆ ಮುಕ್ತವಾಗಿ ಚರ್ಚಿಸಿ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ಕೋರಿದೆ.

ಸಭೆಯಲ್ಲಿ ಚರ್ಚಿಸತಕ್ಕ ವಿಷಯ: 1) ವಾರ್ಡಿನಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಬಗ್ಗೆ 2) ವಾರ್ಡಿನ ಘನತ್ಯಾಜ್ಯಗಳ ಸಂಬಂಧಿಸಿದ ವಿಷಯಗಳು 3) BWSSB, BESCOM, & POLICE ಇಲಾಖೆಯ ವಿಷಯಗಳು 4) ಪಾಲಿಕೆಯ ಅರಣ್ಯ, ವಿದ್ಯುತ್, ಬೃಹತ್ ಮಳೆನೀರು ಕಾಲುವೆ ಹಾಗೂ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗಕ್ಕೆ ಸಂಬಂಧಿಸಿದ ವಿಷಯಗಳು 5) ಪಾಲಿಕೆಯ ಕಂದಾಯ ಮತ್ತು ಆರೋಗ್ಯ ಇಲಾಖೆಯ ವಿಷಯಗಳು ಹಾಗೂ 6) ಸಾರ್ವಜನಿಕರ ಇತರೆ ಕುಂದು ಕೊರತೆಗಳ ಬಗ್ಗೆ ಇತ್ಯಾದಿ.

Sd/- AE 1/12/22

ಕಾರ್ಯದರ್ಶಿ, ವಾರ್ಡ್ ಸಮಿತಿ
ವಾರ್ಡ್ ಸಂಖ್ಯೆ: 144

**ಪ್ರತಿಯನ್ನು:**

1. ಶ್ರೀ. ಪ್ರದೀಪ್‌ಕುಮಾರ್ ಎಸ್., ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕೆಂಪೇಗೌಡನಗರ ಉಪವಿಭಾಗ ಹಾಗೂ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿ ಅಧ್ಯಕ್ಷರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಕಾರ್ಯಪಾಲಕ ಅಭಿಯಂತರರು (ಚಿಕ್ಕಪೇಟೆ ವಿಭಾಗ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು (ವಿದ್ಯುತ್–ದಕ್ಷಿಣ) ರವರಿಗೆ ಸಲ್ಲಿಸುತ್ತಾ, ವಾರ್ಡ್‌ನ ವಿದ್ಯುತ್ ಸಮಸ್ಯೆಗಳ ಬಗ್ಗೆ, ಸಾರ್ವಜನಿಕರ ದೂರು ತುಂಬಾ ಇರುವುದರಿಂದ ಚರ್ಚಿಸಲು ಸಂಬಂಧಪಟ್ಟ ವಾರ್ಡಿನ ಅಭಿಯಂತರರನ್ನು ಕಡ್ಡಾಯವಾಗಿ ಸಭೆಗೆ ಹಾಜರಾಗಲು ಸೂಚನೆ ನೀಡುವಂತೆ ಕೋರಿದೆ.
4. ಕಾರ್ಯಪಾಲಕ ಅಭಿಯಂತರರು (ಬೃಹತ್ ಮಳೆನೀರು ಕಾಲುವೆ) ರವರಿಗೆ ಸಲ್ಲಿಸುತ್ತಾ, ವಾರ್ಡ್‌ನ ಮಳೆನೀರು ಕಾಲುವೆ ಸಮಸ್ಯೆಗಳ ಬಗ್ಗೆ, ಸಾರ್ವಜನಿಕರ ದೂರು ತುಂಬಾ ಇರುವುದರಿಂದ ಚರ್ಚಿಸಲು ಸಂಬಂಧಪಟ್ಟ ವಾರ್ಡಿನ ಅಭಿಯಂತರರನ್ನು ಕಡ್ಡಾಯವಾಗಿ ಸಭೆಗೆ ಹಾಜರಾಗಲು ಸೂಚನೆ ನೀಡುವಂತೆ ಕೋರಿದೆ.
5. ಕಾರ್ಯಪಾಲಕ ಅಭಿಯಂತರರು (ಯೋಜನೆ ಕೇಂದ್ರ–4) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಅಧೀಕ್ಷಕರು ತೋಟಗಾರಿಕೆ ಇಲಾಖೆ (ದಕ್ಷಿಣ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂಪೇಗೌಡನಗರ ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಸ.ಕಾ.ನಿ. ಅಭಿಯಂತರರು, ಚಿಕ್ಕಪೇಟೆ ವಿಭಾಗ ಘನತ್ಯಾಜ್ಯ ನಿರ್ವಹಣೆ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
9. ಉಪ ಆರೋಗ್ಯಾಧಿಕಾರಿ (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಸಹ ಕಂದಾಯ ಅಧಿಕಾರಿ, ಕೆಂಪೇಗೌಡನಗರ ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ಬಿಬಿಎಂಪಿ ರವರಿಗೆ ಸಲ್ಲಿಸಿದೆ.

Scanned with CamScanner